ದಿನಾಂಕ 17.05.2019ರಂದು ಡಾ: ಎನ್. ಕೃಷ್ಣಪ್ಪ ಕೋಡಿಪಾಳ್ಯ, ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಲಭ್ಯಗಳು-2 ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಅಪಂರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಗ್ರಾಮೀಣ ಇಂಧನ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ಸಭೆಯ ನಡವಳಿಗಳು.

ಸಭೆಯಲ್ಲಿ ಹಾಜರಿದ್ದವರು ; ಪಟ್ಟಿ ಲಗತ್ತಿಸಿದೆ.

ಡಾ: .ಎನ್.ಕೃಷ್ಣಪ್ಪ ಕೋಡಿಪಾಳ್ಯ, ನಿರ್ದೇಶಕರು(ಗ್ರಾಮೂಸೌ-2)ರವರು ಸಭೆಯಲ್ಲಿ ಉಪಸ್ಥಿತರಿದ್ದ ವರನ್ನೆಲ್ಲಾ ಸ್ವಾಗತಿಸಿದರು.

1. ನಿರ್ದೇಶಕರು (ಗ್ರಾಮೂಸೌ-2) ರವರು ನವ ರಾಷ್ಟ್ರೀಯ ಜೈವಿಕ ಅನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮದಡಿ 2018-19ನೇ ಸಾಲಿನ ಮಾರ್ಚ್ 2019 ಅಂತ್ಯದವರೆಗಿನ ಪ್ರಗತಿ ವರದಿಯನ್ನು ಪರಿಶೀಲಿಸಿ ಶೇ.100 ಹಾಗೂ 100ಕ್ಕಿಂತ ಹೆಚ್ಚಿನ ಪ್ರಗತಿ ಸಾಧಿಸಿದ ಬಾಗಲಕೋಟೆ, ಚಿಕ್ಕಮಗಳೂರು, ಹಾಸನ, ಹಾವೇರಿ ಕಲಬುರುಗಿ, ಉತ್ತರ ಕನ್ನಡ ಮತ್ತು ಯಾದಗಿರಿ ಜಿಲ್ಲಾ ಪಂಚಾಯತ್‌ಗಳ ಯೋಜನಾ ಅಭಿಯಂತರರನ್ನು ಚಪ್ಪಾಳೆ ಮೂಲಕ ಪ್ರಶಂಶಿಸಿದರು.

2. ಬಾಗಲಕೋಟೆ ಜಿಲ್ಲೆಯಲ್ಲಿ 2017-18 ಮತ್ತು 2018-19ನೇ ಸಾಲುಗಳಲ್ಲಿ ನಿಗದಿಪಡಿಸಿದ ಭೌತಿಕ ಗುರಿಗಿಂತ ಹೆಚ್ಚಿನ ಪ್ರಗತಿ ಸಾಧಿಸಿದ್ದರೂ ಸಹ ಹೆಚ್ಚಿನ ಪ್ರಗತಿಗೆ ಸಂಬಂಧಿಸಿದಂತೆ ಸರ್ಕಾರದ ಪೂರ್ವಾನುಮತಿ ಪಡೆದಿರುವುದಿಲ್ಲ. ಇನ್ನು ಮುಂದೆ ಹೆಚ್ಚಿನ ಭೌತಿಕ ಗುರಿಯ ಅಗತ್ಯತೆ ಇದ್ದಲ್ಲಿ ಜನವರಿ 2020ರ ಮಾಹೆಯ ಒಳಗಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮವಹಿಸುವುದು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

3. 2018-19ನೇ ಸಾಲಿನಲ್ಲಿ ನವ ರಾಷ್ಟ್ರೀಯ ಜೈವಿಕ ಅನಿಲ ಮತ್ತು ಸಾವಯವ ಗೊಬ್ಬರ ಕಾರ್ಯಕ್ರಮದಡಿ (NNBOMP) ಸಿಎ ಆಡಿಟ್ ವರದಿ ಹಾಗೂ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸುವಾಗ ನಿಗದಿತ ನಮೂನೆಯಲ್ಲಿ (26 ಕಾಲಂ)ನಲ್ಲಿ ಫಲಾನುಭವಿಗಳ ವಿವರಗಳನ್ನು ಸಹ ತಪ್ಪದೇ PDF ಮುಖೇನ dd.b.rep.rdpr@gmail.com ಗೆ ಕಳುಹಿಸುವುದು

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

4. ಸಭೆಯಲ್ಲಿ ಯೋಜನಾ ಅಭಿಯಂತರರು ಜಿಲ್ಲಾ ಪಂಚಾಯತ್‌ಗಳಲ್ಲಿ ನಿಯಮಾವಳಿಯನ್ವಯ ಎಲ್ಲಾ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಆಡಿಟ್‌ರನ್ನು ನೇಮಿಸುವ ಪ್ರಕ್ರಿಯೆ ಕುರಿತು ಸಮಯಾವಕಾಶ ತೆಗೆದುಕೊಳ್ಳುವ ನಿಟ್ಟಿನಲ್ಲಿ ನಿಗದಿತ ಕಾಲಮಿತಿಯೊಳಗೆ ಸಿಎ ಆಡಿಟ್ ವರದಿ ಸಲ್ಲಿಸಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿದ್ದರ ಮೇರೆಗೆ NNBOMP ಕಾರ್ಯಕ್ರಮವು ಕೇಂದ್ರ ವಲಯದ ಯೋಜನೆಯಾಗಿರುವುದರಿಂದ ಕೇಂದ್ರ ಸರ್ಕಾರಕ್ಕೆ ಪ್ರತಿ ವರ್ಷ ಜೂನ್ ಅಥವಾ ಜುಲೈ ಮಾಹೆಯಲ್ಲಿ ಸಿ ಎ ಆಡಿಟ್ ವರದಿ ಹಾಗೂ ಹಣಬಳಕೆ ಪ್ರಮಾಣ ಪತ್ರ ಸಲ್ಲಿಸಿ, ಪ್ರಸಕ್ತ ಸಾಲಿಗೆ ಕಾರ್ಯಕ್ರಮದಡಿ ಅನುದಾನ ಪಡೆಯಬೇಕಿರುತ್ತದೆ. ಆದ್ದರಿಂದ NNBOMP ಕಾರ್ಯಕ್ರಮದಡಿ ಆಡಿಟ್ ಮಾಡುವ ಕುರಿತಂತೆ CA ರವರನ್ನು ನೇಮಿಸುವ ಸಂಬಂಧ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರನ್ನು ಕೋರುವಂತೆ ತೀರ್ಮಾನಿಸಲಾಯಿತು.

(ಕ್ರಮ: ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ & ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

5. 2019–20ನೇ ಸಾಲಿನಲ್ಲಿ ಕಡ್ಡಾಯವಾಗಿ ಕಾರ್ಯಕ್ರಮದಡಿ ಬಿಡುಗಡೆ ಮಾಡುವ ಕೇಂದ್ರ ಸಹಾಯಧನವನ್ನು Public Financial Management System ( PFMS) ಮುಖೇನ ಪಾವತಿಸಲು ಕ್ರಮವಹಿಸುವುದು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

6. 2019–20ನೇ ಸಾಲಿಗೆ ಸಂಬಂಧಿಸಿದಂತೆ NNBOMP ರಡಿ ಕ್ರಿಯಾ ಯೋಜನೆಯನ್ನು ನಿಗದಿತ ಕಾಲಮಿತಿಯೊಳಗೆ ಸರ್ಕಾರಕ್ಕೆ ಸಲ್ಲಿಸುವುದು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

7. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಯೋಜನಾ ಅಭಿಯಂತರರು ತಮ್ಮ ಜಿಲ್ಲೆಗೆ ಸಂಬಂಧಿಸಿದಂತೆ ಜೈವಾನಿಲ ಸ್ಥಾವರಗಳಿಗೆ ಸಂಬಂಧಿಸಿದಂತೆ ಭೌತಿಕ ಗುರಿಯ ಬೇಡಿಕೆಯನ್ನು ಕೋರಿದ್ದರ ಮೇರೆ ಕೇಂದ್ರ ಸರ್ಕಾರವು ನಿಗದಿಪಡಿಸಿದ ಒಟ್ಟಾರೆ ಭೌತಿಕ ಗುರಿಯಲ್ಲಿ ಹಿಂದಿನ ಸಾಲುಗಳಲ್ಲಿ ಸಾಧಿಸಿದ ಪ್ರಗತಿ ಹಾಗೂ ಕೋರಿಕೆ ಆಧರಿಸಿ ಭೌತಿಕ ಗುರಿಯನ್ನು ಹಂಚಿಕೆ ಮಾಡಲಾಗುವುದು ಎಂದು ತಿಳಿಸಲಾಯಿತು.

8. 2017–18ನೇ ಸಾಲಿನಲ್ಲಿ ಮಹಾಲೇಖಪಾಲರ ಆಡಿಟ್ ದೃಢೀಕರಣದಲ್ಲಿ ಫಲಾನುಭವಿಗಳ ವಿವರಗಳನ್ನು Website ನಲ್ಲಿ ಅಳವಡಿಸದೇ ಇರುವುದದನ್ನು ಆಕ್ಷೇಪಿಸಲಾಗಿದೆ. ಆದ್ದರಿಂದ ಫಲಾನುಭವಿಗಳ ವಿವರಗಳನ್ನು ಸಲ್ಲಿಸದೇ ಇರುವ ಬಹುತೇಕ ಜಿಲ್ಲಾ ಪಂಚಾಯತ್‌ಗಳು 2015–16 ರಿಂದ 2017–18ನೇ ಸಾಲಿನವರೆಗೆ ಫಲಾನುಭವಿಗಳ ವಿವರಗಳನ್ನು PDF ಮುಖೇನ ನಿಗದಿತ ನಮೂನೆಯಲ್ಲಿ ವರ್ಷಾವಾರು Breakup ನೊಂದಿಗೆ ನಿಗದಿತ ಇ–ಮೇಲ್ ಗೆ ಕಳುಹಿಸುವಂತೆ ತಿಳಿಸಲಾಯಿತು

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

9. ಕಾರ್ಯಕ್ರಮದಡಿ ಹಿಂದಿನ ಸಾಲುಗಳಿಗೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯ ಸಹಾಯಧನ ಪಾವತಿಸಲು ಬಾಕಿ ಇದ್ದಲ್ಲಿ ಕೂಡಲೇ ನಿಗದಿತ ನಮೂನೆಯಲ್ಲಿ ವಿವರಗಳನ್ನು ನೀಡುವಂತೆ ತೀರ್ಮಾನಿಸಲಾಯಿತು

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

10. ಪ್ರತಿ ಮಾಹೆ 5ನೇ ತಾರೀಖಿನೊಳಗೆ ಕಾರ್ಯಕ್ರಮದ ಪ್ರಗತಿ ವರದಿ ಹಾಗೂ ತ್ರೈಮಾಸಿಕ ವರದಿಗಳನ್ನು ನಿಗದಿತ ನಮೂನೆಗಳಲ್ಲಿ ಸರ್ಕಾರಕ್ಕೆ ಸಲ್ಲಿಸಲು ಕ್ರಮ ವಹಿಸುವುದು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

11. ಎಲ್ಲಾ ಜಿಲ್ಲೆಗಳ ಯೋಜನಾ ಅಭಿಯಂತರರು ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಪ್ರಮುಖ ರೂವಾರಿಗಳಾದ ಟರ್ನ ಕೀ ಏಜನ್ಸಿ/ಕೆಲಸಗಾರರು ನಿರ್ಮಿಸಿದ ಸ್ಥಾವರಗಳಿಗೆ ಅಂದರೆ ಸುಮಾರು 100 ಸ್ಥಾವರಗಳಿಗೆ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು (ರೂ.20.00ಲಕ್ಷ)ಪಾವತಿಸಿದಲ್ಲಿ ಬ್ಯಾಂಕ್‌ನಿಂದ ಶೇ.18 ರಷ್ಟು TDS ಕಟಾಯಿಸಲಾಗುತ್ತಿದೆ. ಇದು ಸಹಾಯಧನ ಕಾರ್ಯಕ್ರಮವಾಗಿರುವುದರಿಂದ ಹಾಗೂ ಘಟಕಕ್ಕೆ ತಗಲುವ ಅಂದಾಜು ವೆಚ್ಚವನ್ನು ಸಹಾಯಧನದೊಂಗೆ ಭರಿಸಲು ಫಲಾನುಭವಿಗಳು ಅಶಕ್ತರಾಗಿರುವುದರಿಂದ ಟರ್ನ ಕೀ ಏಜನ್ಸಿಯವರೇ ಫಲಾನುಭವಿಗಳಿಂದ ಸಹಾಯಧನಕ್ಕೆ ಸಂಬಂಧಿಸಿದಂತೆ ದೃಢೀಕರಣ ಪಡೆದು ಸ್ಥಾವರಗಳನ್ನು ನಿರ್ಮಿಸಿ ಕೊಡುತ್ತಿರುವ ಹಿನ್ನೆಲೆಯಲ್ಲಿ ಟರ್ನ ಕೀ ಏಜನ್ಸಿಯವರ ಖಾತೆಯಿಂದ TDS ಕಟಾಯಿಸದಂತೆ ಸರ್ಕಾರದಿಂದ ಬ್ಯಾಂಕುಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಸಭೆಯ ಗಮನಕ್ಕೆ ತಂದರು. ಈ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತ್‌ಗಳಿಂದ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ತೀರ್ಮಾನಿಸಲಾಯಿತು.

(ಕ್ರಮ: ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು).

12. 2017–18ನೇ ಸಾಲಿನ ನೂತನ ಸೌರ ಬೆಳಕು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಗದಿತ ನಮೂನೆಯಲ್ಲಿ ವಿವರ, ವಾಸ್ತವಿಕ ಸ್ಥಿತಿ, ಹಣ ಬಳಕೆ ಪ್ರಮಾಣ ಪತ್ರವನ್ನು ಕೂಡಲೇ ನೀಡುವಂತೆ ಸಂಬಂಧ ಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಕೋರುವಂತೆ ತೀರ್ಮಾನಿಸಲಾಯಿತು

(ಕ್ರಮ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಕಲಬುರುಗಿ ಧಾರವಾಡ ಮತ್ತು ಗದಗ)

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಡಾ:ಎನ್ ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು(ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಕಡತ ಸಂಖ್ಯೆ:ಗ್ರಾಅಪ/29/ಜೈಅಯೋ/2019 ಬೆಂಗಳೂರು, ದಿನಾಂಕ.20.05.2019.

ಗೆ:

1. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಯೋಜನಾ ಅಭಿಯಂತರರು(ಸಗ್ರಾಇಂಕಾ).
3. ರಕ್ಷ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು,

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪ ಇಲಾಖೆ.
3. ವಿಶೇಷ ಅಧಿಕಾರಿ, ಇಲಾಖಾ ಗಣಕಜಾಲ, ಗ್ರಾಅಪ ಇಲಾಖೆ.

## ದಿನಾಂಕ 17.05.2019ರಂದು ನಡೆದ ಗ್ರಾಇಂಕಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಹಾಜರಾದವರ ಪಟ್ಟಿ.

1. ಡಾ:ಎನ್. ಕೃಷ್ಣಪ್ಪ ಕೋಡಿಪಾಳ್ಯ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಶ್ರೀ ರವಿ ಕುಮಾರ, ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಶ್ರೀ ಮಾರ್ಕಂಡಯ್ಯ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್ ಬಾಗಲಕೋಟೆ & ವಿಜಯಪುರ.
4. ಶ್ರೀ ಎಂ. ಎಸ್. ಸುದರ್ಶನ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬೆಂಗಳೂರು(ಗ್ರಾ) ಮತ್ತು ಕೋಲಾರ.
5. ಶ್ರೀ ಶಿವಣ್ಣ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬೆಂಗಳೂರು(ನ).
6. ಶ್ರೀ ಶಿವಾನಂದ ಕಮತಗಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬೆಳಗಾವಿ.
7. ಶ್ರೀ ಜಿ. ಎಲ್. ಬದಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಬಳ್ಳಾರಿ & ಕೊಪ್ಪಳ.
8. ಶ್ರೀ ಬಸವರಾಜ್ ಯಲಬುರಗಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಮಂಡ್ಯ & ಚಾಮರಾಜನಗರ.
9. ಶ್ರೀ ಶೇಕ್ ಅಹಮ್ಮದ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಚಿತ್ರದುರ್ಗ.
10. ಶ್ರೀ ಬಸವರಾಜಪ್ಪ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ದಾವಣಗೆರೆ.
11. ಶ್ರೀ ದತ್ತಾತ್ರಿ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಹಾಸನ, ಚಿಕ್ಕಮಗಳೂರು, ಉಡುಪಿ, ದಕ್ಷಿಣ ಕನ್ನಡ ಮತ್ತು ಕೊಡಗು.
12. ಶ್ರೀ ಕೃಷ್ಣ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಉತ್ತರ ಕನ್ನಡ & ಧಾರವಾಡ.
13. ಶ್ರೀ ಉತ್ತಮ ಕುಮಾರ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಹಾವೇರಿ & ಗದಗ.
14. ಶ್ರೀ ಮರಳ ಸಿದ್ದೇಶ್ವರ, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
15. ಶ್ರೀ ಎಂ. ಹೆಚ್, ಭಾಸ್ಕರ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ಶಿವಮೊಗ್ಗ.
16. ಶ್ರೀ ಶ್ರೀನಿವಾಸ್, ಯೋಜನಾ ಅಭಿಯಂತರರು(ಸಗ್ರಾಇಂಕಾ), ಜಿಲ್ಲಾ ಪಂಚಾಯತ್, ತುಮಕೂರು.
17. ಶ್ರೀಮತಿ ನೇತ್ರಾವತಿ, ಅಧೀಕ್ಷಕರು, ಗ್ರಾಮೂಸೌ-2, ಗ್ರಾಅಪಂ. ರಾಜ್ ಇಲಾಖೆ.

–0–0–